## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ನೀಡುತ್ತಿರುವ ಮಾಸಿಕ ಗೌರವ ಧನವನ್ನು ಇಮ್ಮಡಿಗೊಳಿಸುವುದು.

---

**ಓದಲಾಗಿದೆ:**

1. ಸರ್ಕಾರದ ಆದೇಶಸಂ. ಗ್ರಾಅಪ 214 ಜಿಪಸ 2008, ದಿನಾಂಕ 22.08.2008.
2. ಸರ್ಕಾರದ ಆದೇಶ ಸಂ. ಗ್ರಾಅಪ 123 ಜಿಪಸ 2011, ದಿನಾಂಕ 25.05.2011.

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2)ರ ಸರ್ಕಾರದ ಆದೇಶಗಳಲ್ಲಿ ರಾಜ್ಯದ ಗ್ರಾಮ ಪಂಚಾಯತಿ, ಜಿಲ್ಲಾ, ತಾಲ್ಲೂಕು ಹಾಗೂ ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡಂತೆ ಮಾಸಿಕ ಗೌರವ ಧನ ಮಂಜೂರು ಮಾಡಲಾಗಿದೆ.

(ರೂ.ಗಳಲ್ಲಿ)

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 500 | 2250 | 3000 |
| ಉಪಾಧ್ಯಕ್ಷರು | 300 | 1500 | 2250 |
| ಸದಸ್ಯರು | 250 | 750 | 1500 |

2014–15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ನೀಡುತ್ತಿರುವ ಮಾಸಿಕ ಗೌರವ ಧನವನ್ನು ಇಮ್ಮಡಿಗೊಳಿಸಲಾಗುವುದೆಂದು ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಗೌರವ ಧನವನ್ನು ಪರಿಷ್ಕರಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂ. ಗ್ರಾಅಪ 75 ಜಿಪಸ 2014, ಬೆಂಗಳೂರು, ದಿನಾಂಕ 06.12.2014**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2014–15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವ ಧನವನ್ನು ದಿನಾಂಕ 01.04.2014 ರಿಂದ ಅನ್ವಯಿಸುವಂತೆ ಇಮ್ಮಡಿಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿ ಆದೇಶಿಸಿದೆ. ಪರಿಷ್ಕೃತ ಗೌರವ ಧನ ಕೆಳಕಂಡಂತಿದೆ:

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 1000 | 4500 | 6000 |
| ಉಪಾಧ್ಯಕ್ಷರು | 600 | 3000 | 4500 |
| ಸದಸ್ಯರು | 500 | 1500 | 3000 |

ಮೇಲಿನ ವೆಚ್ಚವನ್ನು ಜಿಲ್ಲಾ ಪಂಚಾಯತಿಗಳು ಲೆಕ್ಕಶೀರ್ಷಿಕೆ 2515–00–101–0–28 (ಯೋಜನೇತರ), ತಾಲ್ಲೂಕು ಪಂಚಾಯತಿಗಳು ಲೆಕ್ಕಶೀರ್ಷಿಕೆ 2515–00–102–0–61 (ಯೋಜನೇತರ) ರಡಿ ಭರಿಸತಕ್ಕದ್ದು. ಗ್ರಾಮ ಪಂಚಾಯತಿಗಳ ಲೆಕ್ಕಶೀರ್ಷಿಕೆ ಪ್ರತ್ಯೇಕವಾಗಿ ತಿಳಿಸಲಾಗುವುದು.

ಈ ಆದೇಶವು ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು, 1977ರ ನಿಯಮ 17ರ ಉಪ ನಿಯಮ (2)ರ ಪರಂತುಕದ ವ್ಯಾಪ್ತಿಯಲ್ಲಿ ಬರಲಿದ್ದು, ಅದರಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

**(ಎಸ್.ಎಂ.ಜುಲ್‌ಫಿಖಾರ್‌ಉಲ್ಲಾ)**
ನಿರ್ದೇಶಕರು (ಪಂ.ರಾಜ್–2) ಮತ್ತು ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾ.ಅ&ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
6. ಸಚಿವ ಸಂಪುಟ ಶಾಖೆ, ವಿಧಾನ ಸೌಧ (ವಿಷಯ ಸಂ.ಸಿ:682/2014, ದಿನಾಂಕ 28.11.2014).
7. ಆರ್ಥಿಕ ಇಲಾಖೆ (ವೆಚ್ಚ–6), ವಿಧಾನ ಸೌಧ.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ&ಪಂ.ರಾಜ್ ಇಲಾಖೆ.
9. ಕರ್ನಾಟಕ ವಿಕಾಸ/ವೆಬ್‌ಸೈಟ್.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಮಾನ್ಯ ಗ್ರಾ.ಅ&ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ&ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.